ಕುಂದಾಪುರ ತಾಲ್ಲೂಕಿನಲ್ಲಿರುವ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ವಿದ್ಯಾರ್ಥಿನಿಲಯಗಳ ಬಗ್ಗೆ

701 - ಶ್ರೀ ಕೆ. ಪ್ರತಾಪಚಂದ್ರಶೆಟ್ಟಿ (ಕುಂದಾಪುರ) : ಮಾನ್ಯ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಕುಂದಾಪುರ ತಾಲ್ಲೂಕಿನಲ್ಲಿರುವ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ವಿದ್ಯಾರ್ಥಿನಿಲಯಗಳೆಷ್ಟು? (ವಿವರ ನೀಡುವುದು)*

ಆ) *ಈ ವಿದ್ಯಾರ್ಥಿನಿಲಯಗಳಲ್ಲಿ ಕೊರತೆ ಇರುವ ಹುದ್ದೆಗಳೆಷ್ಟು?*

ಇ) *ಈ ಕೊರತೆಯನ್ನು ನಿವಾರಿಸಲು ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು?*

ಶ್ರೀ ಮಾಲೀಕಯ್ಯ ವಿ. ಗುತ್ತೇದಾರ್ (ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು) :

ಅ) ಕುಂದಾಪುರ ತಾಲ್ಲೂಕಿನಲ್ಲಿ ಆರು ಮೆಟ್ರಿಕ್‌ಪೂರ್ವ ಮತ್ತು ಒಂದು ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳಿರುತ್ತವೆ. ವಿವರಗಳು ಕೆಳಕಂಡಂತಿರುತ್ತವೆ.

1. ಮೆಟ್ರಿಕ್‌ಪೂರ್ವ ಬಾಲಕರ ವಿದ್ಯಾರ್ಥಿನಿಲಯ, ಕುಂದಾಪುರ ಟೌನ್.
2. ಮೆಟ್ರಿಕ್‌ಪೂರ್ವ ಬಾಲಕರ ವಿದ್ಯಾರ್ಥಿನಿಲಯ, ಬೈಂದೂರು
3. ಮೆಟ್ರಿಕ್‌ಪೂರ್ವ ಬಾಲಕರ ವಿದ್ಯಾರ್ಥನಿಲಯ, ಕೇದೂರು
4. ಮೆಟ್ರಿಕ್‌ಪೂರ್ವ ಬಾಲಕರ ವಿದ್ಯಾರ್ಥಿನಿಲಯ, ನೌವುಂದ.
5. ಮೆಟ್ರಿಕ್‌ಪೂರ್ವ ಬಾಲಕರ ವಿದ್ಯಾರ್ಥಿನಿಲಯ, ಬಸರೂರು.
6. ಮೆಟ್ರಿಕ್‌ಪೂರ್ವ ಬಾಲಕಿಯರ ವಿದ್ಯಾರ್ಥಿನಿಲಯ, ಕೇದೂರು.
7. ಮೆಟ್ರಿಕ್‌ನಂತರದ ಬಾಲಕರ ವಿದ್ಯಾರ್ಥಿನಿಲಯ, ಕುಂದಾಪುರ ಟೌನ್.

ಆ) ಈ ವಿದ್ಯಾರ್ಥಿನಿಲಯಗಳಲ್ಲಿ ಒಂದು ವಾರ್ಡನ್ ಹುದ್ದೆ, ಎರಡು ನಿಲಯ ಮೇಲ್ವಿಚಾರಕರ ಹುದ್ದೆಗಳು ಹಾಗೂ ಒಂದು ಅಡಿಗೆ ಸಹಾಯಕರ ಹುದ್ದೆ ಕೊರತೆಯಿರುತ್ತದೆ.

ಇ) ಗ್ರೂಪ್ 'ಸಿ' ಹುದ್ದೆಗಳನ್ನು ತುಂಬಲು ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ನಿರ್ದೇಶನಾಲಯವು ಕ್ರಮ ಕೈಗೊಂಡಿದೆ ಹಾಗೂ ಖಾಲಿ ಇರುವ ಗ್ರೂಪ್ 'ಡಿ' ಹುದ್ದೆಗಳನ್ನು ತುಂಬಲು ಜಿಲ್ಲಾ ಮಟ್ಟದಲ್ಲಿ ಕ್ರಮ ಕೈಗೊಳ್ಳಲಾಗಿದೆ. ಮೇಲಿನ ಹುದ್ದೆಗಳನ್ನು ಆದಷ್ಟು ಬೇಗ ತುಂಬಲಾಗುವುದು.

ಪೌರಾಡಳಿತ ನಿರ್ದೇಶನಾಲಯದ ದೂರವಾಣಿ ಸಂಪರ್ಕ ಕಡಿತಗೊಳಿಸುವುದು

702 - ಶ್ರೀ ಯು.ಆರ್. ಸಭಾಪತಿ (ಉಡುಪಿ) : ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಪೌರಾಡಳಿತ ನಿರ್ದೇಶನಾಲಯದ ದೂರವಾಣಿ ಸಂಪರ್ಕವನ್ನು 1997ನೇ ಮಾರ್ಚ್ ತಿಂಗಳಿನಲ್ಲಿ ಕಡಿದು ಹಾಕಲು ಕಾರಣಗಳೇನು?*